# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ 04/02/2022 ರಂದು ನಡೆದ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ವಾರ್ಡ್ 77 ದತ್ತಾತ್ರೇಯ ದೇವಸ್ಥಾನದ ಸಭೆಯ ನಡವಳಿಗಳು

ಸಭೆಯನ್ನು ಪ್ರಾರಂಭಿಸುತ್ತಾ ಸಭೆಗೆ ಹಾಜರಿದ್ದ ಅಧಿಕಾರಿಗಳನ್ನು ಮತ್ತು ವಾರ್ಡ್ ಸಮಿತಿ ಸದಸ್ಯರಿಗೆ ನೋಡಲ್ ಅಧಿಕಾರಿಗಳು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಿದರು. ಈ ಕೆಳಕಂಡಂತೆ ಚರ್ಚಿಸಿ ನಿರ್ಣಯಿಸಲಾಯಿತು.

1) ಹಾಜರಿದ ಅಧಿಕಾರಿಗಳು:

- ನಾಗರಾಜು, ಜ್ಯೂನಿಯರ್ ಹೆಲ್ತ್ ಇನ್ಸ್‌ಪೆಕ್ಟರ್
- ಮಹೇಶ್, ಬಿ. ಡಬ್ಲ್ಯೂ.ಎಸ್.ಎಸ್.ಬಿ ಇನ್ಸ್‌ಪೆಕ್ಟರ್
- ಲಕ್ಷ್ಮಣ್ ರಾವ್, ಸಿನಿಯರ್ ಹೆಲ್ತ್ ಇನ್ಸ್‌ಪೆಕ್ಟರ್

2) ಹಿಂದಿನ ಸಭೆಯ ನಡುವಳಿಯನ್ನು ಸಭೆಯಲ್ಲಿ ಚರ್ಚಿಸಿದಂತೆ ಸೂಕ್ತ ಕ್ರಮವಹಿಸಲು ಸಭೆಗೆ ನೋಡಲ್ ಅಧಿಕಾರಿಗಳು ಸಂಬಂಧಪಟ್ಟವರಿಗೆ ತಿಳಿಸಿದರು.

3) ವಿದ್ಯುತ್ ದೀಪ ಮತ್ತು ಬೆಸ್ಕಾಂ: ಇಲ್ಲಿಯವರೆಗೆ ವಾರ್ಡ್ ಕಮಿಟಿ ಸಭೆಗೆ ಸಂಬಂಧಪಟ್ಟವರು ಹಾಜರಿರುವುದಿಲ್ಲ.

4) ಇತರೆ ಸಂಬಂಧಪಟ್ಟ ಇಲಾಖಾ ಸಿಬ್ಬಂದಿಗಳು ಮತ್ತು ಪೋಲಿಸ್ ಠಾಣಾ ಸಿಬ್ಬಂದಿಗಳು ಸಭೆಗೆ ಹಾಜರಿರುವುದಿಲ್ಲ.

5) ಸ್ಯಾನಿಟರಿ ಪ್ರಾಬ್ಲಂ ಪೈಪ್‌ಲೈನ್ ರಸ್ತೆಯಲ್ಲಿ ಕಂಡುಬಂದಿರುವುದರಿಂದ ಕೂಡಲೇ ಸರಿ ಪಡಿಸಲು ಸಂಬಂಧಟ್ಟರಿಗೆ ತಿಳಿಸಲಾಗಿದೆ.

6) ಸಭೆಯಲ್ಲಿ ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು ಪ್ರತಿ ಸಭೆಗೆ ಸ್ಟ್ರೀಟ್ ಲೈಟ್ ಸಮಸ್ಯೆಗಳಿರುತ್ತವೆ. ಆದರೆ ಯಾರೋಬ್ಬರು ಸಹ ಸಭೆಗೆ ಹಾಜರಾಗಿ ಮಾಹಿತಿಯನ್ನು ನೀಡುವುದಿಲ್ಲವೆಂದು ತಿಳಿಸಿದರು. ಇದಕ್ಕೆ ನೋಡಲ್ ಅಧಿಕಾರಿ ರವರು ಮಾತನಾಡುತ್ತ ಸಿಬ್ಬಂದಿಗಳು ಮುಂದಿನ ಸಭೆಯಲ್ಲಿ ಹಾಜರಾಗುವಂತೆ ಸೂಚುಸುತ್ತೇನೆ ಎಂದು ತಿಳಿಸಿದರು.

7) ಕಾಡು ಮಲ್ಲೇಶ್ವರ ರೋಡ್‌ನಲ್ಲಿ ಪಾಟ್ ಹೋಲ್ಸ್ ಮುಚ್ಚುವುದು ಅತೀ ಮುಖ್ಯವಾಗಿರುತ್ತದೆ ಎಂದು ಸಭೆಗೆ ತಿಳಿಸಿದಾಗ ವಾರ್ಡ್ ಇಂಜಿನಿಯರ್‌ಗಳು ಕೂಡಲೇ ಕ್ರಮ ವಹಿಸುತ್ತೇನೆಂದು ತಿಳಿಸಿದರು.

ಅಧ್ಯಕ್ಷರ/ನೋಡಲ್ ಅಧಿಕಾರಿಯ ಅನುಮತಿಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ನೋಡಲ್ ಅಧಿಕಾರಿಗಳು**
**ವಾರ್ಡ್ ಸಂ.77,**
**ದತ್ತಾತ್ರೇಯ ದೇವಸ್ಥಾನ ವಾರ್ಡ್**

<u>ಪ್ರತಿಯನ್ನು:-</u>

1. ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಪಶ್ಚಿಮ) ರವರ ಮಾಹಿತಿಗಾಗಿ ಸಲ್ಲಿಸಿದೆ.